6-3-25
27

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ. ಬಿ. ಜಿ. ಪಾಟೀಲ ರವರ ಶೂನ್ಯ ವೇಳೆ ಪ್ರಸ್ತಾವನೆ ಮೇಲಿನ ಹೇಳಿಕೆ

**ಪ್ರಶ್ನೆ :** **ಯಾದಗಿರಿ ಜಿಲ್ಲೆಯಲ್ಲಿ ನೀರಿನ ಸಮಸ್ಯೆ ಬಗೆಹರಿಸಲು ಶಾಶ್ವತ ಪರಿಹಾರ ಒದಗಿಸುವ ಬಗ್ಗೆ.**

ಯಾದಗಿರಿ ಜಿಲ್ಲೆಯಲ್ಲಿ ಸುಮಾರು 250 ಕ್ಕೂ ಹೆಚ್ಚು ಹಳ್ಳಿಗಳಲ್ಲಿ ಬೇಸಿಗೆ ಶುರುವಾಗುವ ಮುನ್ನವೇ ನೀರಿನ ಸಮಸ್ಯೆ ಉಂಟಾಗಿದ್ದು ಕುಡಿಯವ ನೀರಿಗಾಗಿ ಸುರಪುರ ತಾಲ್ಲೂಕಿನ ಕೆಂಭಾವಿ ಸಮೀಪದ ಯಕ್ತಾಪೂರ ಗ್ರಾಮದ ಇಲ್ಲಿನ ನಿವಾಸಿಗಳು ನೀರಿಗಾಗಿ ಪಡುವ ಪಡಿಪಾಟಲು ಅಷ್ಟಿಷ್ಟಲ್ಲ ನೀರಿನ ಸಮಸ್ಯೆ ಬಗ್ಗೆ ಕೇಳಿದರೆ ಇಲ್ಲಿನ ಜನರ ಕಣ್ಣಾಲಿಗಳಲ್ಲಿ ನೀರಾಡುತ್ತದೆ

ಯಕ್ತಾಪೂರ ಗ್ರಾಮ ಪಂಚಾಯಿತಿ 13 ಹಳ್ಳಿಗಳನ್ನೊಳಗೊಂಡ ದೊಡ್ಡ ಗ್ರಾಮ ಪಂಚಾಯಿತಿ ಕೇಂದ್ರವಾಗಿದ್ದು ನಾಲ್ಕೈದು ದಿನಗಳಿಗೊಮ್ಮೆ ಟ್ಯಾಂಕರ್ ಮೂಲಕ ನೀರು ಪೂರೈಸುತ್ತಿರುವುದು ಕಂಡುಬಂದಿರುತ್ತದೆ.

ಮಾನ್ಯ ಸಭಾಪತಿಯವರೇ, ಬಿರು ಬೇಸಿಗೆ ಆರಂಭದ ದಿನಗಳಲ್ಲಿಯೇ ನೀರಿನ ಸಮಸ್ಯೆಯ ಮುನ್ಸೂಚನೆಯಾಗಿದ್ದು ಮುಂದಿನ ದಿನಮಾನದಲ್ಲಿ ಯಾವ ರೀತಿ ನೀರಿನ ಸಮಸ್ಯೆಯಾಗುತ್ತದೆ ಎಂದು ಊಹಿಸಲು ಸಾಧ್ಯವಿಲ್ಲ ಹಾಗಾಗಿ ಟ್ಯಾಂಕರ್ ಮೂಲಕ ನೀರು ಪೂರೈಸುವುದಲ್ಲದೆ ಶಾಶ್ವತ ನೀರಿನ ಸಮಸ್ಯೆಯ ಪರಿಹಾರದ ನಿಟ್ಟಿನಲ್ಲಿ ಚಿಂತನೆ ನಡೆಸಬೇಕೆಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರನ್ನು ಶೂನ್ಯ ವೇಳೆಯಲ್ಲಿ ಆಗ್ರಹಿಸುತ್ತೇನೆ

*****

**ಹೇಳಿಕೆ:**

ಯಾದಗಿರಿ ಜಿಲ್ಲೆಯಲ್ಲಿ ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗಬಹುದಾದ ಸುಮಾರು 272 ಹಳ್ಳಿಗಳನ್ನು ಗುರುತಿಸಲಾಗಿದ್ದು ಸಮಸ್ಯೆಯನ್ನು ಬಗೆಹರಿಸಲು ಈಗಾಗಲೇ 10 ಖಾಸಗಿ ಬೋರ್‌ವೆಲ್‌ಗಳಿಂದ ಹಾಗೂ 2 ಖಾಸಗಿ ಟ್ಯಾಂಕರ್‌ಗಳಿಂದ ನೀರು ಸರಬರಾಜು ಮಾಡಲಾಗುತ್ತಿದೆ. ಸಮಸ್ಯಾತ್ಮಕ ತಾಲ್ಲೂಕುಗಳಲ್ಲಿ ಕುಡಿಯುವ ನೀರಿನ ಅಭಾವವನ್ನು ಕೂಲಂಕುಷವಾಗಿ ಗಮನಿಸಿ ಕೊಳವೆ ಬಾವಿಗಳು ಬತ್ತಿ ಹೋದಲ್ಲಿ ಪ್ರಥಮ ಆದ್ಯತೆ ಮೇರೆಗೆ ಬಾಡಿಗೆ ಆಧಾರದ ಮೇಲೆ ಕೊಳವೆ ಬಾವಿಗಳನ್ನು ಪಡೆಯಲು, ಇದು ಲಭ್ಯವಿಲ್ಲದಿದ್ದಲ್ಲಿ ಟ್ಯಾಂಕರ್ ಮೂಲಕ ನೀರನ್ನು ಸರಬರಾಜು ಮಾಡಲು, ಕೊಳವೆ ಬಾವಿಗಳನ್ನು ಫ್ಲಷಿಂಗ್ (Flushing) ಮಾಡಿ ಮತ್ತು ಆಳಗೊಳಿಸುವುದರೊಂದಿಗೆ (Deepening) ನೀರಿನ ಸಮಸ್ಯೆಗಳನ್ನು ಬಗೆಹರಿಸಲು, ಮುಂದುವರೆದು ಅನಿವಾರ್ಯ ಸಂದರ್ಭದಲ್ಲಿ ಸಂಬಂಧಪಟ್ಟ ಭೂವಿಜ್ಞಾನಿಯವರ ವರದಿಯನುಸಾರ ಹೊಸದಾಗಿ ಬೋರ್‌ವೆಲ್ ಕೊರೆಯಿಸಲು ಕ್ರಮವಹಿಸಿ ತುರ್ತು ಕಾಮಗಾರಿಗಳ ಕ್ರಿಯಾ ಯೋಜನೆ(Contingency Action Plan)ಯನ್ನು ರೂ. 360.00 ಲಕ್ಷಗಳಲ್ಲಿ ತಯಾರಿಸಲಾಗಿದೆ.

ಯಕ್ತಾಪೂರ ಗ್ರಾಮ ಪಂಚಾಯತಿಯು ಒಟ್ಟು 13 ಹಳ್ಳಿಗಳನ್ನು ಒಳಗೊಂಡಿದ್ದು ಪ್ರಸ್ತುತ ಯಕ್ತಾಪೂರ ಆಶ್ರಯ ಕಾಲೋನಿಯಲ್ಲಿ ನೀರಿನ ಸಮಸ್ಯೆ ಉಂಟಾಗಿದ್ದು ಸದರಿ ಗ್ರಾಮಕ್ಕೆ ಪ್ರತಿ ದಿನ 6 ಟ್ರಿಪ್ ಗಳಂತೆ ಟ್ಯಾಂಕರ್ ಮೂಲಕ ಕುಡಿಯುವ ನೀರನ್ನು ಸರಬರಾಜು ಮಾಡಲಾಗುತ್ತಿದೆ. ಇನ್ನುಳಿದ ಹಳ್ಳಿಗಳಲ್ಲಿ ಮುಂಬರುವ ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗುವ ಗ್ರಾಮಗಳಿಗೆ ಖಾಸಗಿ ಬೋರ್‌ವೆಲ್‌ಗಳಿಂದ ಕುಡಿಯುವ ನೀರನ್ನು ಸರಬರಾಜು ಮಾಡಲಾಗುವುದು.

ಯಾದಗಿರಿ ಜಿಲ್ಲೆಯ 6 ತಾಲ್ಲೂಕುಗಳ 465 ಗ್ರಾಮಗಳ 710 ಜನವಸತಿಗಳಿಗೆ ಶಾಶ್ವತ ಕುಡಿಯುವ ನೀರನ್ನು ಒದಗಿಸುವ ಸಲುವಾಗಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯು ಅಂದಾಜು ಮೊತ್ತ ರೂ.2004.00 ಕೋಟಿಗಳಲ್ಲಿ ನಾರಾಯಣಪುರ ಜಲಾಶಯದಿಂದ ಪ್ರತಿ ಮನೆಗೆ 55 LPCD ಯಂತೆ ಶುದ್ಧ ಕುಡಿಯುವ ನೀರನ್ನು ಸರಬರಾಜು ಮಾಡಲು ಕಾಮಗಾರಿ ಕೈಗೆತ್ತಿಕೊಂಡಿದ್ದು, ಕಾಮಗಾರಿ ಪ್ರಗತಿಯ ಹಂತದಲ್ಲಿದ್ದು, ಮುಕ್ತಾಯದ ನಂತರ ಜಿಲ್ಲೆಯ ಎಲ್ಲಾ ಗ್ರಾಮೀಣ ಜನವಸತಿಗಳಿಗೆ ಶಾಶ್ವತ ಕುಡಿಯುವ ನೀರಿನ ಪರಿಹಾರ ಸಿಗಲಿದೆ.

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ
ಸಚಿವರು